# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸಕಾಅ/ವಾ.ನಂ.41/ಪಿಆರ್/ 04/2020-21

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ
ಪೀಣ್ಯ ಕೈಗಾರಿಕಾ ಪ್ರದೇಶ ಉಪವಿಭಾಗ, ದಾಸರಹಳ್ಳಿ ವಲಯ
ಹೆಚ್.ಎಂ.ಟಿ.ಬಡಾವಣೆ, ನಾಗಸಂದ್ರ ಪೋಸ್ಟ್
ಬೆಂಗಳೂರು, ದಿನಾಂಕ : 21-11-2020

## ವಾರ್ಡ್ -41ರ ವಾರ್ಡ್ ಸಭೆಯ ನಡವಳಿ

ದಿನಾಂಕ:-21-11-2020 ರಂದು ಪೀಣ್ಯ ಕೈಗಾರಿಕ ಪ್ರದೇಶ ಉಪ ವಿಭಾಗ ವಾರ್ಡ್ ನಂ.41 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಪ್ರಭು.ಕೆ, ವಾರ್ಡ್-41 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

1. ಶ್ರೀ ಪ್ರಭು.ಕೆ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ನರಸಿಂಹಮೂರ್ತಿ ನಾಯ್ಕ್ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು
3. ಶ್ರೀ, ಸ್ವಾಮಿ ಕಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.41) ಮತ್ತು ಸದಸ್ಯರು.
4. ಶ್ರೀ.ಮಂಜುನಾಥ್, ಪಶುಪಾಲನೆ ಇಲಾಖೆ,ದಾಸರಹಳ್ಳಿ ವಲಯ
5. ಶ್ರೀ.ಸಮಿಉಲ್ಲಾ, ತೋಟಗಾರಿಕೆ ಇಲಾಖೆ ದಾಸರಹಳ್ಳಿ ವಲಯ
6. ಪಿ.ಸುರೇಶ್, ಸದಸ್ಯರು, ಗೃಹಲಕ್ಷ್ಮಿ ಬಡಾವಣೆ

**ಮಾನ್ಯ ನೋಡಲ್ ಅಧಿಕಾರಿಗಳು ಸ್ವಾಗತದೊಂದಿಗೆ ಅಧಿಕಾರಿಗಳು ಸಭೆಯನ್ನು ಪ್ರಾರಂಭಿಸಲಾಯಿತು.**

- ವಾರ್ಡಿನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ರ ಬಗ್ಗೆ ಚರ್ಚಿಸಿ ಒಟ್ಟು +Veಕೇಸ್ 1025 ಒಟ್ಟು ಬಿಡುಗಡೆ -741 ಒಟ್ಟು ಆಕ್ಟಿವ್ ಕೇಸ್-268 ಇರುತ್ತದೆ ಎಂದು ಸಭೆಗೆ ತಿಳಿಸಿದರು.
- ದಿನಾಂಕ :-01-11-2011 ರಿಂದ 21-11-2020 ರವರೆಗೆ ಒಟ್ಟು 158 ಪ್ರಕರಣಗಳಿಗೆ ರೂ.39550.00 ಗಳನ್ನು ಮಾಸ್ಕ್ ಧರಿಸದೆ ಇರುವ ಸಾರ್ವಜನಿಕರಿಗೆ ದಂಡ ವಿಧಿಸಲಾಗಿದೆ. ಎಂದು ಮಾರ್ಷಲ್ ಸಭೆಗೆ ತಿಳಿಸಿದರು.
- ವಾರ್ಡ್ ಸಂಖ್ಯೆ 41 ರಲ್ಲಿ 33 ಆಟೋಗಳಿದ್ದು, 29 ಗುತ್ತಿಗೆ ಆಟೋಗಳು 4 ಸ್ತ್ರೀ ಶಕ್ತಿ ಆಟೋಗಳು ಇದರಲ್ಲಿ 4 ಒಣ ಕಸ ಸಂಗ್ರಹಂಣೆ ಆಟೋ 1500ಕೆ ಜಿ ಒಣ ಕಸ ಸಂಗ್ರಹಿಸಲಾಗುತ್ತಿದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿದರು
- ಗೃಹಲಕ್ಷ್ಮೀ ಬಡಾವಣೆಯಲ್ಲಿ ಬೀದಿ ದೀಪಗಳು ಸರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲವೆಂದು ನಿವಾಸಿಗಳು ತಿಳಿಸದರ ಮೇರೆಗೆ ಮಾನ್ಯ ಅಧ್ಯಕ್ಷರು ದೂರವಾಣಿ ಮೂಲಕ ವಿದ್ಯುತ್ ಇಲಾಖೆ ರವರಿಗೆ ಸಂಪರ್ಕಿಸಿ ಕೂಡಲೇ ದುರಸ್ಥಿಗೊಳಿಸಿ ಮುಂದಿನ ಸಭೆಯಲ್ಲಿ ವರದಿ ನೀಡಲು ಸೂಚಿಸಿದರು
- ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆ ಗುಂಡಿಗಳನ್ನು ಕೂಡಲೇ ಮುಚ್ಚುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸದರು.
- ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆ ಗುಂಡಿಗಳನ್ನು ಕೂಡಲೇ ಮುಚ್ಚುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸದರು.
- ವಾರ್ಡ್ ವ್ಯಾಪ್ತಿಯಲ್ಲಿ ಬಿದ್ದಿರುವ ಓ.ಎಫ್.ಸಿ.ಕೇಬಲ್‌ಗಳನ್ನು ಕೂಡಲೇ ಸಹಾಯಕ ಅಭಿಯಂತರರಿಗೆ ಸೂಚಿಸದರು.
- ವಾರ್ಡ್ ವ್ಯಾಪ್ತಿಯಲ್ಲಿರುವ ತೆರದ ಚರಂಡಿಗಳಲ್ಲಿ ಹೂಳನ್ನು ತೆಗೆಸಲು ಸಹಾಯ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

ಮು.ತಿ.ನೋ

- ವಾರ್ಡ್ ವ್ಯಾಪ್ತಿಯ ಹಲಾವರು ಕಡೆ ಮ್ಯಾನ್ ಹೋಲ್ ತುಂಬಿ ಹರಿಯುತ್ತಿರುವುದು ಹಾಗೂ ನೀರು ಪೋಲಾಗಿ ಹರಿಯುತ್ತಿರುವುದರ ಬಗ್ಗೆ ಕ್ರಮ ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಕಸದ ಬ್ಲಾಕ್ ಸ್ಪಾಟ್‌ಗಳನ್ನು ಕ್ರಮೇಣ ಕಡಿಮೆ ಮಾಡಲು ಮಾನ್ಯ ನೋಡಲ್ ಅಧಿಕಾರಿಗಳು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಎಲ್ಲಾ ಪ್ರದೇಶಗಳ್ಲಿ ಸೊಳ್ಳೆ ಔಷದಿ ಸಿಂಪಡಿಸಲು ಮಾನ್ಯ ನೋಡಲ್ ಅಧಿಕಾರಿಗಳು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.
- ಗೃಹಲಕ್ಷ್ಮಿ ಬಡಾವಣೆಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ನಿಯಂತ್ರಿಸಲು ಸದರಿ ಬಡಾವಣೆಯ ನಿವಾಸಿಗಳು ಸಭೆಯಲ್ಲಿ ಕೋರಿರುತ್ತಾರೆ ಅದರಂತೆ ಸದರಿ ಇಲಾಖೆಯಿಂದ ಹಾಜರಿದ್ದ ಅಧಿಕಾರಿಗಳಿಗೆ ಕೂಡಲೇ ಕ್ರಮ ವಹಿಸಲು ಮಾನ್ಯ ನೋಡಲ್ ಅಧಿಕಾರಿಗಳು ವಹಿಸಲು ಸೂಚಿಸಿದರು.
- ಅಧ್ಯಕ್ಷರ ಆದೇಶದ ಮೇರೆಗೆ ಸಾರ್ವಜನಿಕರ ಸಮಸ್ಯೆಗಳು ಪರಿಹರಿಸಲಾಯಿತು

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 41 ಪೀಣ್ಯ ಕೈಗಾರಿಕಾ ಪ್ರದೇಶ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು/**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ. 41 ಪೀಣ್ಯ ಕೈಗಾರಿಕಾ ಪ್ರದೇಶ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ**

1. ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
2. ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3. ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪೀ.ಕೈ.ಪ್ರ)ರವರ ಮಾಹಿತಿಗಾಗಿ ಕಳುಹಿಸಿದೆ
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರ ಮಾಹಿತಿಗಾಗಿ ಕಳುಹಿಸಿದೆ
7. ಸಹಾಯಕ ಕಾರ್ಯಪಾಲಕ ಅಭಿಯಂತರರು (SWD) ರವರ ಮಾಹಿತಿಗಾಗಿ ಕಳುಹಿಸಿದೆ
8. ಸಹಾಯಕ ಕಾರ್ಯಪಾಲಕ ಅಭಿಯಂತರರು (BWSSB)ರವರ ಮಾಹಿತಿಗಾಗಿ ಕಳುಹಿಸಿದೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಮಾಹಿತಿಗಾಗಿ ಕಳುಹಿಸಿದೆ
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರ ಮಾಹಿತಿಗಾಗಿ ಕಳುಹಿಸಿದೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಎನ್-4 ಪೀಣ್ಯ ರವರ ಮಾಹಿತಿಗಾಗಿ ಕಳುಹಿಸಿದೆ